ಕರ್ನಾಟಕ ಸರ್ಕಾರ

## ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ,

## ಬೆಂಗಳೂರು-560001

ಸಂಖ್ಯೆ: ಸಿ1(5)ಸ್ಥಾ.ಪ.ಬಡ್ತಿ/06/2021-22 ದಿನಾಂಕ: 30/07/2022

**ಅಧಿಕೃತ ಜ್ಞಾಪನ**

**ವಿಷಯ:** ಸಾರ್ವಜನಿಕ ಶಿಕ್ಷಣ ಇಲಾಖೆಯ ಮೈಸೂರು ವಿಭಾಗದ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಉಪಪ್ರಾಂಶುಪಾಲರ ವೃಂದದ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿಲು ಕೌನ್ಸಿಲಿಂಗ್ - ಒಂದನೇ ಸುತ್ತಿನ ಕೌನ್ಸಲಿಂಗ್ ನಂತರ ಉಳಿಕೆ ಹುದ್ದೆಗಳಿಗೆ ಮುಂದುವರೆದ ಕೌನ್ಸಲಿಂಗ್‌ನಲ್ಲಿ ಬಡ್ತಿ ಮುಂದೂಡಿರುವ ಶಿಕ್ಷಕರು

**ಉಲ್ಲೇಖ:**

1. ನಿರ್ದೇಶಕರು(ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಬೆಂಗಳೂರು ರವರ ಪತ್ರ ದಿ:11.07.2022 ಮತ್ತು 12.07.2022
2. ಈ ಕಛೇರಿಯ ಪತ್ರ ಸಮ ಸಂಖ್ಯೆ ದಿನಾಂಕ:14.07.2022.
3. ಇಲಾಖಾ ಮುಂಬಡ್ತಿ ಸಭಾ ನಡಾವಳಿ ದಿನಾಂಕ.25.07.2022 ಹಾಗೂ 27.07.2022.
4. ಈ ಕಛೇರಿಯ ಅಧಿಕೃತ ಜ್ಞಾಪನ ಪತ್ರ ಸಮ ಸಂಖ್ಯೆ ದಿನಾಂಕ.29.07.2022.
5. ಕೌನ್ಸಿಲಿಂಗ್ ದಿನಾಂಕ.30.07.2022.

**************

ಪ್ರಸ್ತಾವನೆ:-

ಮೈಸೂರು ವಿಭಾಗದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರೌಢಶಾಲೆ/ಪದವಿ ಪೂರ್ವ ಕಾಲೇಜು ಹಾಗೂ ವಿವಿಧ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ(1)ರನ್ವಯ ಪ್ರಕಟಿಸಲಾಗಿದೆ. ಸದರಿ ಜೇಷ್ಠತಾ ಪಟ್ಟಿಯನ್ನಾದರಿಸಿ ಮೈಸೂರು ವಿಭಾಗದಲ್ಲಿ ಖಾಲಿ ಇರುವ ಗ್ರೂಪ್-ಬಿ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ಉಪಪ್ರಾಂಶುಪಾಲರ ವೃಂದದ ಹುದ್ದೆಗಳಿಗೆ ಬಡ್ತಿ ನೀಡಲು ಶಿಕ್ಷಕರಿಂದ ಪ್ರಸ್ತಾವನೆಗಳನ್ನು ಉಲ್ಲೇಖ(2) ರಲ್ಲಿ ಪಡೆಯಲಾಗಿದೆ.

ಉಲ್ಲೇಖ(3) ರಂತೆ ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಬಡ್ತಿಗೆ ಅರ್ಹರಿರುವ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರಿಗೆ, ಗ್ರೂಪ್-ಬಿ ವೃಂದದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಉಪಪ್ರಾಂಶುಪಾಲರ ವೃಂದದ ಹುದ್ದೆಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಗಿದೆ.

ಜಂಟಿ ನಿರ್ದೇಶಕರು (ಆಡಳಿತ)
ಆಯುಕ್ತರ ಕಛೇರಿ,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಉಲ್ಲೇಖ(4)(5) ರಂತೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಕೌನ್ಸಿಲಿಂಗ್ ಆದ್ಯತಾ ಪಟ್ಟಿಯನ್ನು ಪ್ರಕಟಿಸಿ ದಿನಾಂಕ.30.07.2022 ರಂದು ಕೌನ್ಸಿಲಿಂಗ್ ನಡೆಸಲಾಗಿದೆ. ಸದರಿ ಕೌನ್ಸಿಲಿಂಗ್ ನಲ್ಲಿ ಭಾಗವಹಿಸಿದ ಕೆಳಕಂಡ ಶಿಕ್ಷಕರು ಬಡ್ತಿಯನ್ನು ಮುಂದೂಡಲು ಇಚ್ಛಿಸಿರುತ್ತಾರೆ. ಸದರಿ ಶಿಕ್ಷಕರ ಮನವಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್57ಎಸ್.ಆರ್.ಆರ್.2001 ದಿನಾಂಕ: 22-05-2002 ಮತ್ತು ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರನ್ವಯ ಅಂಗೀಕರಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶ ಮಾಡಲಾಗಿದೆ.

**ಆದೇಶ:-**

ಈ ಕೆಳಕಂಡ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು, ಗ್ರೂಪ್-ಬಿ ವೃಂದದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಉಪಪ್ರಾಂಶುಪಾಲರ ವೃಂದದ ಹುದ್ದೆಗೆ ಮುಂಬಡ್ತಿ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ಬಿಟ್ಟುಕೊಡಲು ಕೋರಿರುವುದನ್ನು ಪರಿಗಣಿಸಿ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್57ಎಸ್.ಆರ್.ಆರ್.2001 ದಿನಾಂಕ:22-05-2002 ಮತ್ತು ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರನ್ವಯ ಅಂಗೀಕರಿಸಿ ಅನುಮತಿಸಿದೆ.

**ಬಡ್ತಿ ಮುಂದೂಡಿರುವ ಶಿಕ್ಷಕರು**

| ಕ್ರ.ಸಂ. | ಜೇಷ್ಠತಾ ಸಂಖ್ಯೆ | ಕೆ.ಜಿ.ಐ.ಡಿ.ಸಂ | ಶಿಕ್ಷಕರ ಹೆಸರು (ಶ್ರೀ / ಶ್ರೀಮತಿ) |
|---|---|---|---|
| 1 | 1635 | 1346186 | ತ್ರಿವೇಣಿ ಕೆ ವಿ |
| 2 | 1639 | 1295985 | ಪುಷ್ಪಾವತಿ |
| 3 | 1672 | 1343587 | ಶಹನಾಜ್ ಬಾನು |
| 4 | 1677 | 1343011 | ನಿರ್ಮಲ.ಜೆ.ಎಲ್. |
| 5 | 1686 | 1353178 | ಶೈಲಜಾ ಎನ್.ಸಿ |
| 6 | 1688 | 1382397 | ಶ್ರೀದೇವಿ ಪಿ |
| 7 | 1691 | 1385926 | ಮಲ್ಲಿಕಾರ್ಜುನಯ್ಯ ಬಿ ಜಿ |
| 8 | 3213 | 1548087 | ಚೆನ್ನಸ್ವಾಮಿ |

ಬಡ್ತಿಯನ್ನು ಬಿಟ್ಟುಕೊಟ್ಟಿರುವ ಶಿಕ್ಷಕರುಗಳು ಒಂದು ವರ್ಷ ಅಥವಾ ಮುಂದಿನ ಬಡ್ತಿ ಪ್ರಕ್ರಿಯೆ ಇವುಗಳಲ್ಲಿ ಯಾವುದು ನಂತರವೋ ಅಲ್ಲಿಯವರೆವಿಗೆ ಬಡ್ತಿಗೆ ಅರ್ಹರಿರುವುದಿಲ್ಲ. **ಸಂಬಂಧಿಸಿದ ಕಛೇರಿ ಮುಖ್ಯಸ್ಥರು ಈ ಕುರಿತು ತಪ್ಪದೇ ಸೇವಾ ಪುಸ್ತಕದಲ್ಲಿ ನಮೂದಿಸಲು ತಿಳಿಸಿದೆ.**

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

ಡಾ. ರೂಪಶ್ರೀ ಎಸ್, ಕ.ಆ.ಸೇ.
ಜಂಟಿ ನಿರ್ದೇಶಕರು(ಆಡಳಿತ)

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.

2. ಬೆಂಗಳೂರು/ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾ ಅಧಿಕಾರಿಗಳಿಗೆ.
3. ನಿರ್ದೇಶಕರು(ಪ್ರೌಢಶಿಕ್ಷಣ) ಆಯುಕ್ತರ ಕಛೇರಿ, ಬೆಂಗಳೂರು.
4. ವಿಭಾಗೀಯ ಸಹ ನಿರ್ದೇಶಕರು ಬೆಂಗಳೂರು/ಮೈಸೂರು ವಿಭಾಗ.
5. ಬೆಂಗಳೂರು/ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರ ಅಗತ್ಯ ಕ್ರಮಕ್ಕಾಗಿ.
6. ಸಂಬಂಧಿಸಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
7. ಸಂಬಂಧಿಸಿದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
8. ಸಂಬಂಧಿಸಿದ ಶಾಲೆ/ಕಛೇರಿ ಮುಖ್ಯಸ್ಥರಿಗೆ [ಕ್ಷೇತ್ರಶಿಕ್ಷಣಾಧಿಕಾರಿಗಳ ಮುಖಾಂತರ].
9. ಸಂಬಂಧಿಸಿದ ಶಿಕ್ಷಕರುಗಳಿಗೆ.
10. ಕಛೇರಿಯ ಇ-ಆಡಳಿತ ಶಾಖೆಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು.
11. ಕಛೇರಿ ಪ್ರತಿ.